**All India Radio: Bangalore**
**Regional Bulletin In Kannada**
**27.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.02.2026 / 2.30 p.m.**

**<><><><>**

ಮುಖ್ಯಾಂಶಗಳು

1. ಕರ್ನಾಟಕ ಡಿಜಿಟಲ್ ಪ್ರಪಂಚದ ಸೃಜನಶೀಲ ರಾಜಧಾನಿಯಾಗಿ ಹೊರಹೊಮ್ಮುವ ಗುರಿ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಅಂಡಾಣು ದಾನ ಜಾಲ ಪ್ರಕರಣ ; ರಾಜ್ಯದ ಎಲ್ಲಾ ಐವಿಎಫ್ ಕೇಂದ್ರಗಳ ಮೇಲೆ ನಿಗಾ - ಸಚಿವ ದಿನೇಶ್ ಗುಂಡೂರಾವ್
3. ರಾಜ್ಯಾದ್ಯಂತ ನಾಳೆ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭ ; ಶಿಕ್ಷಣ ಇಲಾಖೆಯಿಂದ ಸಿದ್ಧತೆ ಪೂರ್ಣ
4. ರಾಜ್ಯದಲ್ಲಿ ಕೆಸ್‌ಐಸಿ ಉದ್ಯಮ ಮುಚ್ಚದಂತೆ ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ ಸಲಹೆ
5. ರಣಜಿ ಟ್ರೋಫಿ ಫೈನಲ್ ಹಣಾಹಣಿ ; ಮೊದಲ ಇನ್ನಿಂಗ್ಸ್‌ನಲ್ಲಿ ಜಮ್ಮು-ಕಾಶ್ಮೀರ ವಿರುದ್ಧ ೨೯೩ ರನ್‌ಗಳಿಸಿದ ಕರ್ನಾಟಕ

<><><><>

ರಾಜ್ಯವು ಅನಿಮೇಷನ್, ವಿಷ್ಯುವಲ್ ಎಫೆಕ್ಟ್, ಗೇಮಿಂಗ್, ಕಾಮಿಕ್ಸ್ ಮತ್ತು ಎಕ್ಸ್ಟೆಂಡೆಂಡ್ ರಿಯಾಲಿಟಿ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಜಿಎಎಫ್‌ಎಕ್ಸ್ ಸಮ್ಮೇಳನದ ೭ನೇ ಆವೃತ್ತಿ ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕ ಪ್ರತಿಭೆ ಅಭಿವೃದ್ಧಿ ಹಾಗೂ ಜಾಗತಿಕ ಪಾಲುದಾರಿಕೆಗಳ ಮೂಲಕ ಈ ಕ್ಷೇತ್ರವನ್ನು ಮುನ್ನಡೆಸುತ್ತಿದೆ ಎಂದು ತಿಳಿಸಿದ್ದಾರೆ. ವಿನ್ಯಾಸ, ಕೊಡಿಂಗ್, ಕೃತಕಬುದ್ಧಿಮತ್ತೆ, ಮಾಡೆಲಿಂಗ್ ಮತ್ತು ಉತ್ಪಾದನಾ ನಿರ್ವಹಣೆಯಂತಹ ಕ್ಷೇತ್ರಗಳಲ್ಲಿ ರಾಜ್ಯ ಮುಂದಿನ ೫ ವರ್ಷಗಳಲ್ಲಿ ೧೦ ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ

ಸಾಫ್ಟ್‌ವೇರ್ ಮತ್ತು ಜೈವಿಕ ತಂತ್ರಜ್ಞಾನದಿಂದ ಬಾಹ್ಯಾಕಾಶ ಮತ್ತು ಡೀಪ್‌ಟೆಕ್ ನಾವೀನ್ಯತೆವರೆಗೆ ತಂತ್ರಜ್ಞಾನ ಕ್ಷೇತ್ರದಲ್ಲಿ ಬೆಂಗಳೂರು ಮುಂಚೂಣಿಯಲ್ಲಿದೆ. ಸರ್ಕಾರವು ೨೦೨೪-೨೯ರ ಅವಧಿಗೆ ತನ್ನ ಮೂರನೇ ಎವಿಜಿಸಿ-ಎಕ್ಸ್-ಆರ್ ನೀತಿ ಜಾರಿಗೆ ತರುತ್ತಿದೆ ಎಂದು ಹೇಳಿದ್ದಾರೆ. ಕರ್ನಾಟಕವು ಭಾರತದ ಸಿಲಿಕಾನ್ ವ್ಯಾಲಿಯಾಗಿ ಮಾತ್ರವಲ್ಲದೆ ಡಿಜಿಟಲ್ ಪ್ರಪಂಚದ ಸೃಜನಶೀಲ ರಾಜಧಾನಿಯಾಗಿಯೂ ಹೊರಹೊಮ್ಮುವ ಗುರಿ ಹೊಂದಿದೆ ಎಂದು ಘೋಷಿಸಿದ್ದಾರೆ.

<><><>

ಮಹಾರಾಷ್ಟ್ರದಲ್ಲಿ ಬೆಳಕಿಗೆ ಬಂದಿರುವ ಅಂಡಾಣು ದಾನ ಜಾಲ ಪ್ರಕರಣದಲ್ಲಿ ಬೆಂಗಳೂರಿನ ನಂಟು ಬಹಿರಂಗಗೊಂಡಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ರಾಜ್ಯದ ಎಲ್ಲಾ ಐವಿಎಫ್ ಕೇಂದ್ರಗಳ ಮೇಲೆ ನಿಗಾ ವಹಿಸಲು ಆದೇಶ ನೀಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಆಸ್ಪತ್ರೆ ಯಾರು ಭಾಗಿಯಾಗಿದ್ದಾರೆ ಎಂಬ ಕುರಿತು ಮಾಹಿತಿ ಬಂದಿಲ್ಲ. ಗೃಹ ಇಲಾಖೆಯಿಂದ ಹೆಚ್ಚಿನ ಮಾಹಿತಿ ಸಂಗ್ರಹಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಮಹಾರಾಷ್ಟ್ರದ ಥಾಣೆ ಮತ್ತು ಇತರ ಜಿಲ್ಲೆಗಳಲ್ಲಿ ಅಕ್ರಮ ಅಂಡಾಣು ದಾನ ಜಾಲವನ್ನು ಭೇದಿಸಿರುವ ಪೊಲೀಸರು ಮೂವರು ಮಹಿಳೆಯರನ್ನು ಬಂಧಿಸಿದ್ದಾರೆ. ಆರ್ಥಿಕವಾಗಿ ದುರ್ಬಲವಾಗಿರುವ ಮಹಿಳೆಯರನ್ನು ಶೋಷಣೆಗೊಳಿಸಿ ಅಂಡಾಣುವನ್ನು ಮಾರಾಟ ಮಾಡಲಾಗುತ್ತಿತ್ತು.

<><><>

ನಾಳೆಯಿಂದ ರಾಜ್ಯಾದ್ಯಂತ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಆರಂಭವಾಗಲಿದೆ. ಎಲ್ಲಾ ಜಿಲ್ಲೆಗಳಲ್ಲಿ ಪರೀಕ್ಷೆ ಸುಗಮವಾಗಿ ನಡೆಸಲು ಶಿಕ್ಷಣ ಇಲಾಖೆ ಸಿದ್ಧತೆ ಪೂರ್ಣಗೊಳಿಸಿದೆ. ಈ ಬಾರಿ ೫ ಸಾವಿರದ ೧೭೪ ಕಾಲೇಜುಗಳ ೭ ಲಕ್ಷದ ೧೦ ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೋಂದಣಿ ಮಾಡಿಕೊಂಡಿದ್ದಾರೆ. ವಿಜ್ಞಾನ ವಿಷಯದಲ್ಲಿ ೨ ಲಕ್ಷದ ೯೨ ಸಾವಿರ, ವಾಣಿಜ್ಯ ೨ ಲಕ್ಷದ ೧೧ ಸಾವಿರ, ಕಲಾವಿಭಾಗದಲ್ಲಿ ೧ ಲಕ್ಷದ ೪೨ ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ಒಂದು ಸಾವಿರದ ೨೧೭ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ನಡೆಯಲಿದ್ದು, ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗಿದೆ. ಮೊದಲ ದಿನವಾದ ನಾಳೆ ಕನ್ನಡ, ಅರೆಬಿಕ್ ಭಾಷಾ

ಪರೀಕ್ಷೆಗಳು ನಡೆಯಲಿವೆ. ದಕ್ಷಿಣ ಕನ್ನಡ ಜಿಲ್ಲೆಯ ೨೨ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಮಂಗಳೂರು, ಮೂಡಬಿದಿರೆ, ಉಳ್ಳಾಲ ಮತ್ತು ಮುಲ್ಕಿ ತಾಲೂಕಿನ ಒಟ್ಟು ೨೨ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ. ಪರೀಕ್ಷೆಗಳನ್ನು ಶಾಂತಿಯುತವಾಗಿ, ಸುಸೂತ್ರವಾಗಿ ಹಾಗೂ ದೋಷರಹಿತವಾಗಿ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ೧೦೦ ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೧೦ ಪರೀಕ್ಷಾ ಕೇಂದ್ರಗಳಲ್ಲಿ ೧೧ ಸಾವಿರದ ೫೬೫ ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ. ಪಾರದರ್ಶಕ ಹಾಗೂ ಸುವ್ಯವಸ್ಥಿತವಾಗಿ ಪರೀಕ್ಷೆ ನಡೆಸುವ ನಿಟ್ಟಿನಲ್ಲಿ ಜಿಲ್ಲೆಯ ನಾಲ್ಕು ತಾಲ್ಲೂಕಿನ ಎಲ್ಲಾ ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ, ವೆಬ್ ಕ್ಯಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಹಾವೇರಿ ಜಿಲ್ಲೆಯಲ್ಲಿ ನಾಳೆಯಿಂದ ೧೫ ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಗಳು ಜರುಗಲಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಪರೀಕ್ಷೆ ಹಿನ್ನೆಲೆಯಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಪರೀಕ್ಷೆಯ ನಿರ್ವಹಣೆಯಲ್ಲಿ ಯಾವುದೇ ಲೋಪವಾಗದಂತೆ ಕಾರ್ಯ ನಿರ್ವಹಿಸುವಂತೆ ಶಿಕ್ಷಕರಿಗೆ ಸೂಚಿಸಿದ್ದಾರೆ.

<><><><>

ರಾಜ್ಯದಲ್ಲಿ ರೇಷ್ಮೆ ಬಟ್ಟೆಗಳಿಗೆ ಉತ್ತಮ ಬೇಡಿಕೆ ಇದ್ದು ಯಾವುದೇ ಕಾರಣಕ್ಕೂ ಕೆಎಸ್ಐಸಿ ಉದ್ಯಮವನ್ನು ಮುಚ್ಚಲು ಬಿಡುವುದಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ಚನ್ನಪಟ್ಟಣದ ಕೆಎಸ್ಐಸಿ ಕಾರ್ಖಾನೆಗೆ ಇಂದು ಭೇಟಿ ನೀಡಿದ ಅವರು, ಅಲ್ಲಿನ ಉದ್ಯೋಗಿಗಳಿಂದ ಮನವಿ ಸ್ವೀಕರಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಟಿ. ನರಸಿಪುರದಲ್ಲಿ ಕೆಎಸ್ಐಸಿ ಮಾತೃ ಸಂಸ್ಥೆಯ ಜಾಗದಲ್ಲಿ ಕ್ರೀಡಾಂಗಣ ನಿರ್ಮಿಸಲು ಹೊರಟಿರುವುದು ಸರಿಯಲ್ಲ. ಇಲ್ಲಿನ ಕಾರ್ಖಾನೆ ಮುಚ್ಚಿದರೆ ಚನ್ನಪಟ್ಟಣ ಮತ್ತು ಮೈಸೂರಿನಲ್ಲಿರುವ ಕೆಎಸ್ಐಸಿ ಕಾರ್ಖಾನೆಗಳು ಮುಚ್ಚಿ ಹೋಗಲಿವೆ. ಇದರಿಂದ ೧ ಸಾವಿರ ೧೦೦ಕ್ಕೂ ಹೆಚ್ಚು ಕಾರ್ಮಿಕರು ಉದ್ಯೋಗ ಕಳೆದುಕೊಂಡು ಬೀದಿ ಪಾಲಾಗಲಿದ್ದಾರೆ. ಹೀಗಾಗಿ

ಯಾವುದೇ ಕಾರಣಕ್ಕೂ ಟಿ. ನರಸೀಪುರದ ಕೆಎಸ್‌ಐಸಿ ಸ್ಥಳದಲ್ಲಿ ಕ್ರೀಡಾಂಗಣ ನಿರ್ಮಿಸಬಾರದು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

<><><><>

ಹೆಚ್‌ಎಎಲ್‌ನ ಮಾಜಿ ಅಧ್ಯಕ್ಷ ಹಾಗೂ ಇಂಡಿಯನ್ ಏರೋಸ್ಪೇಸ್ ಟೆಕ್ನಾಲಜಿ ಅಂಡ್ ಇಂಡ್ರಸ್ಟ್ರೀಸ್ ಅಧ್ಯಕ್ಷ ಸಿ.ಜಿ.ಕೃಷ್ಣದಾಸ್ ನಾಯರ್ ಬರೆದ ಇಂಡಿಯನ್ ಏರ್‌ಕ್ರಾಫ್ಟ್ ಇಂಡ್ರಸ್ಟ್ರೀಸ್ ಪುಸ್ತಕವನ್ನು ಬೆಂಗಳೂರಿನಲ್ಲಿ ಇಂದು ಬಿಡುಗಡೆಗೊಳಿಸಲಾಯಿತು. ಈ ವೇಳೆ ಮಾತನಾಡಿದ ಡಾ.ನಾಯರ್, ಹೆಚ್.ಎ.ಎಲ್. ವಾಣಿಜ್ಯ ಪ್ರಯಾಣಿಕ ವಿಮಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಯಾಕೆ ಮುಂದಾಗಿಲ್ಲ ಎಂಬ ಪ್ರಶ್ನೆಯನ್ನು ಪರಿಹರಿಸುವುದಕ್ಕಾಗಿ ಪುಸ್ತಕವನ್ನು ಬರೆಯುವ ಉದ್ದೇಶವಾಗಿತ್ತು ಎಂದು ಹೇಳಿದ್ದಾರೆ. ಭಾರತದ ವಾಯುಯಾನ ಕ್ಷೇತ್ರದಲ್ಲಿನ ಬೆಳವಣಿಗೆಗೆ ಸಾರ್ವಜನಿಕ ಮತ್ತು ಖಾಸಗಿ ವಲಯದ ಕಂಪನಿಗಳ ನಡುವಿನ ಸಹಕಾರ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದ್ದಾರೆ.

<><><><>

ರಾಜ್ಯದ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡಿದ ಮಾಜಿ ಮುಖ್ಯಮಂತ್ರಿ ದಿವಂಗತ ಕೆ.ಸಿ.ರೆಡ್ಡಿಯವರ ಆದರ್ಶಗಳು ನಮಗೆ ಸ್ಪೂರ್ತಿ ಹಾಗೂ ಮಾರ್ಗದರ್ಶನ ನೀಡಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ದಿವಂಗತ ಕೆ.ಸಿ.ರೆಡ್ಡಿ ಯವರ ಪುಣ್ಯ ತಿಥಿಯ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಕೆ.ಸಿ.ರೆಡ್ಡಿ ಸ್ವತಂತ್ರ ಭಾರತದ ರಾಜ್ಯದ ಮೊದಲ ಮುಖ್ಯಮಂತ್ರಿಯಾದವರು. ಮೈಸೂರು ಸಂಸ್ಥಾನವನ್ನು ಒಗ್ಗೂಡಿಸುವುದರಲ್ಲಿ ಇವರು ಪ್ರಮುಖ ಪಾತ್ರ ವಹಿಸಿದ್ದರು ಎಂದು ಸ್ಮರಿಸಿದರು.

<><><><>

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾದ ಗ್ರಾಮಗಳನ್ನು ಗುರುತಿಸಿ, ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸುವಂತೆ ಮಂಡ್ಯ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಭಿಯಂತರರುಗಳಿಗೆ ಜಿಲ್ಲಾ ಪಂಚಾಯತ್ ಸಿಇಒ ನಂದಿನಿ ಸೂಚಿಸಿದ್ದಾರೆ. ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯಾವುದೇ ಗ್ರಾಮಗಳಿಗೆ ನೀರಿನ ಕೊರತೆ ಎದುರಾಗದಂತೆ ಕ್ರಮ ವಹಿಸಲು ನಿರ್ದೇಶನ

ನೀಡಿದ್ದಾರೆ. ಪ್ರಸಕ್ತ ಸಾಲಿನಲ್ಲಿ ನೀರಿನ ಸಮಸ್ಯೆ ಎದುರಾಗಬಹುದಾದ ೧೩೯ ಗ್ರಾಮಗಳನ್ನು ಗುರುತಿಸಲಾಗಿದ್ದು, ೧೦೬ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಲು ಕ್ರಮವಹಿಸಲಾಗಿದೆ. ಉಳಿದ ೩೩ ಗ್ರಾಮಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ್ದಾರೆ.

<><><><>

ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ೪ನೇ ದಿನದಾಟ ಪ್ರಗತಿಯಲ್ಲಿದೆ. ದಿನದ ಆರಂಭದಲ್ಲಿ ತನ್ನ ಮೊದಲನೇ ಇನ್ನಿಂಗ್ಸ್ ಮುಂದುವರಿಸಿ ಕರ್ನಾಟಕ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೯೩ರನ್ ಗಳಿಸಿದೆ. ಜಮ್ಮು-ಕಾಶ್ಮೀರ ಮೊದಲ ಇನ್ನಿಂಗ್ಸ್‌ನಲ್ಲಿ ೫೮೪ ರನ್ ಗಳಿಸಿದೆ. ತನ್ನ ಎರಡನೇ ಇನ್ನಿಂಗ್ಸ್ ಆರಂಭಿಸಿರುವ ಜಮ್ಮು ಕಾಶ್ಮೀರ ಇತ್ತೀಚಿನ ವರದಿ ಬಂದಾಗ ೩ ವಿಕೆಟ್ ನಷ್ಟಕ್ಕೆ ೮೫ ರನ್ ಗಳಿಸಿ ಆಡುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>